ಖಂಡ ೧ ಇತ್ಯಾದಿ:

ಅಧ್ಯಕ್ಷರು,—ಪ್ರಸ್ತಾವ ಏನೆಂದರೆ '' ಮೊದಲನೇ ಖಂಡ ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ''

ಪ್ರಸ್ತಾವವನ್ನು ಅಂಗೀಕರಿಸಲಾಯಿತು.

ಮೊದಲನೇ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು,

ಪ್ರಸ್ತಾವದ ಅಂಗೀಕಾರ

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು, ಸಂಸದೀಯ ವ್ಯವಹಾರ ಹಾಗೂ ಆಹಾರ ಮತ್ತು ನಾಗರೀಕ ಸರಬರಾಜು ಮಂತ್ರಿಗಳು).—ಮಾನ್ಯ ''ಅಧ್ಯಕ್ಷರೆ ೧೯೮೮ನೇ ಇಸವಿಯ ಕರ್ನಾಟಕ ಸಿವಿಲ್ ನ್ಯಾಯಾಲಯಗಳ ಶಾಸನದ (ತಿದ್ದುಪಡಿ) ವಿಧೇಯಕವನ್ನು'' ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ ''೧೯೮೮ನೇ ಇಸವಿಯ ಕರ್ನಾಟಕ ಸಿವಿಲ್ ನ್ಯಾಯಾಲಯಗಳ ಶಾಸನದ (ತಿದ್ದುಪಡಿ) ವಿಧೇಯಕ''ವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕಕ್ಕೆ ಒಪ್ಪಿಗೆ ನೀಡಲಾಯಿತು.

1988ನೇ ಇಸವಿಯ ಕರ್ನಾಟಕ ಕುಷ್ಠರೋಗ ಶಾಸನಗಳ (ನಿರಸನ) ವಿಧೇಯಕ

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಮಂತ್ರಿ) —ಮಾನ್ಯ ಅಧ್ಯಕ್ಷರೇ, ಮಾನ್ಯ ಶ್ರೀ ಎಸ್.ಆರ್. ಬೊಮ್ಮಾಯಿ (ಮುಖ್ಯ ಮಂತ್ರಿಗಳು) ಅವರ ಪರವಾಗಿ ೧೯೮೮ನೇ ಇಸವಿಯ ಕರ್ನಾಟಕ ಕುಷ್ಠರೋಗ ಶಾಸನಗಳ (ನಿರಸನ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ,

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಮಂತ್ರಿ).—ಮಾನ್ಯ ಅಧ್ಯಕ್ಷರೇ, ಈ ಕುಷ್ಠರೋಗ ಎನ್ನುವುದು ಈಗ ಕ್ಯೂರಬಲ್ ಡಿಸೀಸ್ ಎಂದು ಸಾಬೀತಾಗಿದೆ. ಈಗ ಇರತಕ್ಕಂಥ ಕಾನೂನು ಪ್ರಕಾರ ಕುಷ್ಠರೋಗಿಗಳನ್ನು ಬೇರೆ ಕಡೆ ಇಡಬೇಕು ಸಮಾಜದ ಇತರೆ ಜನರ ಜೊತೆಯಲ್ಲಿ ಬೆರೆಯದೇ ಇರತಕ್ಕಂಥ ರೀತಿಯಲ್ಲಿ ಕಾನೂನು ಇದೆ. ಈಗ ಕುಷ್ಠರೋಗ ಬೇರೆ ಖಾಹಿಲೆಗಳ ಹಾಗೆ ವಾಸಿಯಾಗುವುದರಿಂದ ಅವರನ್ನು ಪ್ರತ್ಯೇಕವಾಗಿ ಇಡುವುದು ಬೇಡವೆಂದು ಈ ದಿಸೆಯಲ್ಲಿ ಕೆಲಸ ಮಾಡತಕ್ಕಂಥ ಎಲ್ಲಾ ಸಂಘ ಸಂಸ್ಥೆಗಳು ಮನವಿಯನ್ನು ಕೊಟ್ಟಿದ್ದಾರೆ ಅದರ ಪ್ರಕಾರ ಈಗ ಇರುವ ಕಾನೂನನ್ನು ಜಾರಿಗೆ ಕೊಡದೇ ಇರುವ ರೀತಿಯಲ್ಲಿ ತೆಗೆದುಹಾಕತಕ್ಕದ್ದು ಇದೆ. ಇದಕ್ಕೆ ಮಾನ್ಯ ಸದಸ್ಯರು ಬೆಂಬಲ ಕೊಡಬೇಕೆಂದು ಹೇಳುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ ೧೯೮೮ನೇ ಇಸವಿಯ ಕುಷ್ಠರೋಗ ಶಾಸನಗಳ (ನಿರಸನ) ವಿಧೇಯಕವನ್ನು ಪರ್ಯಾಲೋಚಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ವಿಧೇಯಕವನ್ನು ಖಂಡ ಖಂಡವಾಗಿ ಪರ್ಯಾಲೋಚಿಸುವುದಂ

ಅಧ್ಯಕ್ಷರು.—''ಖಂಡ ೨ರಿಂದ ೪ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ೨ರಿಂದ ೪ರವರೆಗೆ ಎರಡೂ ಸೇರಿದಂತೆ ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು

ಖಂಡ ೧ ಇತ್ಯಾದಿ

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ ''ಮೊದಲನೇ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ''

ಪ್ರಸ್ತಾವವನ್ನು ಅಂಗೀಕರಿಸಲಾಯಿತಂ

ಮೊದಲನೇ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು

ಪ್ರಸ್ತಾವದ ಅಂಗೀಕಾರ

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).—ಮಾನ್ಯ ಅಧ್ಯಕ್ಷರೇ, ೧೯೮೮ನೇ ಇಸವಿಯ ಕರ್ನಾಟಕ ಕುಷ್ಠರೋಗ ಶಾಸನಗಳ (ನಿರಸನ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ ''೧೯೮೮ನೇ ಇಸವಿಯ ಕರ್ನಾಟಕ ಕುಷ್ಠರೋಗ ಶಾಸನಗಳ (ನಿರಸನ) ವಿಧೇಯಕವನ್ನು ಅಂಗೀಕರಿಸುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತಂ ಮತ್ತು ವಂಸೂದೆಗೆ ಒಪ್ಪಿಗೆ ನೀಡಲಾಯಿತು

೧೯೮೮ನೇ ಇಸವಿಯ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಂಗಳ (ತಿದ್ದುಪಡಿ) ವಿಧೇಯಂಕ

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಂ. ವೀರಪ್ಪ ಮೊಯಿಲಿ.—ಮಾನ್ಯ ಅಧ್ಯಕ್ಷರೇ, ಇದಕ್ಕೆ ಮಾನ್ಯ ವಿದ್ಯಾಮಂತ್ರಿಗಳು ಬಂದರೆ ಒಳ್ಳೆಯದು. ಏಕೆಂದರೆ ಅಷ್ಟು ಸುಲಭವಾಗಿ ಇದನ್ನು ಪಾಸ್ ಮಾಡುವುದಕ್ಕೆ ಬರುವುದಿಲ್ಲ. ಇದರಲ್ಲಿ ಸಾಕಷ್ಟು ಅಕಾಡೆಮಿಕ್ ಪ್ಯಾಟರ್ಸ್ ಇನ್ವಾಲ್ವ್ ಆಗಿದೆ.

ಅಧ್ಯಕ್ಷರು.—ಮೊದಲು ಮಂತ್ರಿಗಳು ಮಂಡಿಸಲಿ

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಮಂತ್ರಿ).—ಮಾನ್ಯ ಅಧ್ಯಕ್ಷರೇ ಶ್ರೀ ಎಂ. ಚಂದ್ರಶೇಖರ್ (ವಿದ್ಯಾಮಂತ್ರಿ) ಅವರ ಪರವಾಗಿ ೧೯೮೮ನೇ ಇಸವಿಯ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಂಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತಂ